ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

ಪಟ್ಟಿ–೪

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತನೆಯ ಅಧಿವೇಶನ

**ಶುಕ್ರವಾರ, ದಿನಾಂಕ: ೦೪ನೇ ಮಾರ್ಚ್, ೨೦೧೬**

---

**ಸಮೂಹ – V**

೧. ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಪ್ರವಾಸೋದ್ಯಮ ಸಚಿವರು
೨. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು
೩. ವಸತಿ ಸಚಿವರು
೪. ಮೂಲ ಸೌಲಭ್ಯ ಅಭಿವೃದ್ಧಿ ಹಾಗೂ ವಾರ್ತಾ ಮತ್ತು ಹಜ್ ಸಚಿವರು
೫. ಸಣ್ಣ ಕೈಗಾರಿಕೆ ಸಚಿವರು
೬. ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು
೭. ಗಣಿ ಮತ್ತು ಭೂವಿಜ್ಞಾನ ರಾಜ್ಯ ಸಚಿವರು

---

## ರಾಜ್ಯದ ಖಾಸಗಿ ಅನುದಾನಿತ ಸಂಯುಕ್ತ ಪದವಿ ಪೂರ್ವ ಕಾಲೇಜುಗಳಲ್ಲಿಯ ಪ್ರೌಢ ಶಾಲಾ ವಿಭಾಗದ ಮುಖ್ಯೋಪಾಧ್ಯಾಯರ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) –**

೪೬ (೪೦೨) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಎಷ್ಟು ಖಾಸಗಿ ಅನುದಾನಿತ ಸಂಯುಕ್ತ ಪದವಿ ಪೂರ್ವ ಕಾಲೇಜುಗಳಿವೆ ; ಮತ್ತು ಈ ಸಂಯುಕ್ತ ಪದವಿ ಪೂರ್ವ ಕಾಲೇಜುಗಳಲ್ಲಿ ಪ್ರೌಢಶಾಲಾ ವಿಭಾಗದ ಆಡಳಿತ ನೋಡಿಕೊಳ್ಳಲು ಎಷ್ಟು ಮುಖ್ಯೋಪಾಧ್ಯಾಯರ ಹುದ್ದೆಗಳ ಮಂಜೂರಾತಿ ನೀಡಲಾಗಿದೆ ;

(ಆ) ರಾಜ್ಯದ ಸಂಯುಕ್ತ ಪದವಿ ಪೂರ್ವ ಕಾಲೇಜುಗಳಲ್ಲಿ ಮುಖ್ಯೋಪಾಧ್ಯಾಯರ ಹುದ್ದೆಗೆ ಮಂಜೂರಾತಿ ನೀಡದೇ ಇರುವ ಸಂಯುಕ್ತ ಕಾಲೇಜುಗಳಲ್ಲಿ ಪ್ರೌಢಶಾಲಾ ವಿಭಾಗದ ಆಡಳಿತವನ್ನು ಯಾರು ನೋಡಿಕೊಳ್ಳುತ್ತಿದ್ದಾರೆ ; ಮತ್ತು ಅವರಿಗೆ ಹೆಚ್ಚಿನ ಗೌರವ ಸಂಭಾವನೆ ಅಥವಾ ಪ್ರಭಾರ ಭತ್ಯೆಯನ್ನು ಏನಾದರೂ ನೀಡಲಾಗುತ್ತಿದೆಯೇ ;

(ಇ) ರಾಜ್ಯದ ಸರ್ಕಾರಿ ಪ್ರೌಢಶಾಲೆಗಳಲ್ಲಿ ಎಷ್ಟು ಜನ ಪ್ರಭಾರ ಮುಖ್ಯೋಪಾಧ್ಯಾಯರು ಕಾರ್ಯನಿರ್ವಹಿಸುತ್ತಿರುವರು ; ಈ ಪ್ರಭಾರ ಮುಖ್ಯೋಪಾಧ್ಯಾಯರಿಗೆ ಪ್ರತೀ ತಿಂಗಳು ಪ್ರಭಾರ ಭತ್ಯೆ ನೀಡಲಾಗುತ್ತಿದೆಯೇ?

## ಗ್ರಾಮಾಂತರ ಪ್ರದೇಶಗಳಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳ ಸ್ಥಾಪನೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) –**

೪೭ (೪೩೧) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಗ್ರಾಮಾಂತರ ಪ್ರದೇಶದಲ್ಲಿ ಶುದ್ಧ ಕುಡಿಯುವ ನೀರಿನಘಟಕ ಅಳವಡಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು ; ಇಲ್ಲಿಯವರೆಗೆ ಜಿಲ್ಲೆಯಲ್ಲಿ ಕಾರ್ಯಾರಂಭವಾಗಿರುವ ಶುದ್ಧ ಕುಡಿಯುವ ನೀರಿನ ಘಟಕಗಳೆಷ್ಟು ; (ವಿವರ ನೀಡುವುದು)

(ಆ) ತುಂಗಾಭದ್ರ ಮತ್ತು ಕೃಷ್ಣ ಕಾಲುವೆಗಳ ನೀರು ಆಧಾರವಾಗಿರುವ ರಾಯಚೂರು ಜಿಲ್ಲೆಯ ಗ್ರಾಮಗಳಿಗೆ ಪ್ರಸ್ತುತ ಕುಡಿಯುವ ನೀರು ಸರಬರಾಜು ಇಲ್ಲದೆ ಉಂಟಾಗಿರುವ ಸಮಸ್ಯೆಯನ್ನು ನೀಗಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು?

## ಕಲಬುರಗಿ ವಿಮಾನ ನಿಲ್ದಾಣದ ಕಾಮಗಾರಿ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) –**

೪೮ (೪೨೭) ಮೂಲ ಸೌಲಭ್ಯ ಅಭಿವೃದ್ಧಿ ಹಾಗೂ ವಾರ್ತಾ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಲಬುರಗಿ ವಿಮಾನ ನಿಲ್ದಾಣ ವಿನ್ಯಾಸದ ಕಾಮಗಾರಿಗಳ ಹಾಗೂ ಇತರೆ ತಾಂತ್ರಿಕ ಮಂಜೂರಾತಿಯನ್ನು ಕೇಂದ್ರದ ವಿಮಾನಯಾನ ಇಲಾಖೆಯಿಂದ ಪಡೆಯಲಾಗಿದೆಯೇ ; (ಸಂಪೂರ್ಣ ವಿವರ ನೀಡುವುದು)

(ಆ) ಸದರಿ ವಿಮಾನ ನಿಲ್ದಾಣದ ಕಾಮಗಾರಿಗಾಗಿ ಇಲ್ಲಿಯವರೆಗೆ ಆದಂತಹ ವೆಚ್ಚ ಎಷ್ಟು ಹಾಗೂ ಇಲ್ಲಿಯವರೆಗೆ ಅರ್ಧಕ್ಕೆ ನಿಂತಂತಹ ಕಾಮಗಾರಿಗಳಿಗೆ ಕೇಂದ್ರದ ವಿಮಾನಯಾನ ಇಲಾಖೆಯಿಂದ ಒಪ್ಪಿಗೆ ಪಡೆಯಲಾಗಿದೆಯೇ; (ಮಾಹಿತಿ ನೀಡುವುದು)

(ಇ) ಕೇಂದ್ರದ ವಿಮಾನಯಾನ ಇಲಾಖೆಯು ಇತ್ತೀಚೆಗೆ ಸದರಿ ವಿಮಾನ ನಿಲ್ದಾಣದ ವಿನ್ಯಾಸದಲ್ಲಿ ಹಾಗೂ ಕಾಮಗಾರಿಗಳಲ್ಲಿ ಹಲವು ಮಾರ್ಪಾಡುಗಳನ್ನು / ಬದಲಾವಣೆಗಳನ್ನು ಸೂಚಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಹಲವು ಗೊಂದಲಗಳಿಂದ ಹಾಗೂ ತೊಡಕುಗಳಿಂದ ನೆನೆಗುದಿಗೆ ಬಿದ್ದಂತಹ ಈ ಯೋಜನೆಯನ್ನು ಪೂರ್ಣಗೊಳಿಸಲು ಸರ್ಕಾರವು ಮುಂದಾಗುವುದೇ; ಸರ್ಕಾರದ ಮುಂದಿರುವ ಯೋಜನೆಗಳೇನು ? (ಸಂಪೂರ್ಣ ವಿವರ ನೀಡುವುದು)

## ಏಪ್ರಾನ್ (ಫೈಯರ್ ಪ್ರೂಫ್) ಖರೀದಿಯಲ್ಲಿ ಅವ್ಯವಹಾರ

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೯ (೩೧೫) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಉತ್ತರ ಕನ್ನಡ ಜಿಲ್ಲೆಯಲ್ಲಿ ಅಕ್ಷರ ದಾಸೋಹ ಯೋಜನೆಯ ಅಗ್ನಿನಂದಕ (ಫೈಯರ್ ಪ್ರೂಫ್) ಏಪ್ರಾನ್ ಖರೀದಿ ಅವ್ಯವಹಾರದಲ್ಲಿ ಅಧಿಕಾರಿಗಳು ಶಾಮೀಲಾಗಿರುತ್ತಾರೆಂದು ಬೆಳಕಿಗೆ ಬಂದಿರುವುದು ನಿಜವೇ ;

(ಆ) ಕಾರಾಗೃಹ ಇಲಾಖೆಯಲ್ಲಿ ಉನ್ನತ ಹುದ್ದೆ ಅಲಂಕರಿಸಿದ ಅಧಿಕಾರಿಯೊಬ್ಬರು ತಮ್ಮದೇ ಏಜೆನ್ಸಿಯೊಂದರ ಮೂಲಕ ಈ ಅವ್ಯವಹಾರ ನಡೆಸಿರುವ ಬಗ್ಗೆ ತನಿಖೆ ಪ್ರಗತಿಯಲ್ಲಿರುತ್ತದೆಂದು ಈ ಹಿಂದೆ ತಿಳಿಸಿದ ಪ್ರಕಾರ ಇಲ್ಲಿಯವರೆಗೆ ಆದ ತನಿಖೆಯು ಯಾವ ಹಂತದಲ್ಲಿದೆ ; (ವಿವರ ನೀಡುವುದು)

(ಇ) ಉತ್ತರ ಕನ್ನಡ ಜಿಲ್ಲೆಯ ಯಲ್ಲಾಪೂರ ತಾಲ್ಲೂಕಿನ ಉಪ ಬಂಧೀಖಾನೆಯಲ್ಲಿ ಅಧೀಕ್ಷಕರಾಗಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ ಹಾಗೂ ಇದಕ್ಕೆ ಸಂಬಂಧಿಸಿದ ಜಿಲ್ಲೆಯ ಅಕ್ಷರದಾಸೋಹ ಅಧಿಕಾರಿ, ಅಕ್ಷರ ದಾಸೋಹದ ಫೈಯರ್ ಪ್ರೂಫ್ ಖರೀದಿಯ ಅವ್ಯವಹಾರದಲ್ಲಿ ನೇರವಾಗಿ ಶಾಮೀಲಾಗಿರುವುದರಿಂದ ಅವರ ಮೇಲೆ ಇಲ್ಲಿಯವರೆಗೆ ಕ್ರಮಕೈಗೊಳ್ಳದೇ ಇರಲು ಕಾರಣವೇನು ; (ವಿವರ ನೀಡುವುದು)

(ಈ) ಜಿಲ್ಲೆಯಲ್ಲಿ ೨೦೧೩-೧೪ನೇ ಸಾಲಿನಿಂದ ಅಕ್ಷರದಾಸೋಹ ಯೋಜನೆಯಲ್ಲಿ ಅಗ್ನಿನಂದಕ (ಫೈಯರ್ ಪ್ರೂಫ್) ಏಪ್ರಾನ್ ಅನ್ನು ಯಾವ ಏಜೆನ್ಸಿಯಿಂದ ಖರೀದಿಸಿರುತ್ತಾರೆ ಹಾಗೂ ಇದಕ್ಕೆ ಎಷ್ಟು ಮೊತ್ತ ಬಿಡುಗಡೆ ಮಾಡಿರುತ್ತಾರೆ? (ಸಂಬಂಧಿಸಿದ ಸಲಕರಣೆ, ಖರೀದಿಸಿದ ವಿವರವನ್ನು ದಾಖಲೆ ಸಹಿತ ತಾಲ್ಲೂಕುವಾರು ವಿವರ ಒದಗಿಸುವುದು)

## ಗ್ರಾಮಪಂಚಾಯತಿಗಳಿಗೆ ಅಧಿಕಾರ ನೀಡುವ ಬಗ್ಗೆ

**ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) –**

೫೦ (೨೯೨) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಹೊಸದಾಗಿ ಪಂಚಾಯತ್‌ರಾಜ್ ಕಾಯ್ದೆಗೆ ತಿದ್ದುಪಡಿ ತಂದ ನಂತರ ಗ್ರಾಮ ಪಂಚಾಯಿತಿಗಳಿಗೆ ಯಾವ ಯಾವ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು, ಅಧಿಕಾರ ನೀಡಲಾಗಿದೆ ;

(ಆ) ಯಾವ ಯಾವ ಕಾಮಗಾರಿಗಳನ್ನು ಯಾವ ಯಾವ ಲೆಕ್ಕಶೀರ್ಷಿಕೆಯಡಿ ಅನುಷ್ಠಾನಗೊಳಿಸಲಾಗುವುದು ? (ವಿವರ ನೀಡುವುದು)

## ಗೃಹ ಮಂಡಳಿ ನಿವೇಶನ ಮತ್ತು ಮನೆಗಳ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೫೧ (೪೪೦) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಕರ್ನಾಟಕ ಗೃಹ ಮಂಡಳಿಯವರು ನಿರ್ಮಿಸಿರುವ ಮನೆ ಮತ್ತು ನಿವೇಶನಗಳು ಎಷ್ಟು ; (ಕಳೆದ ಎರಡು ವರ್ಷಗಳ ವಿವರ ನೀಡುವುದು)

(ಆ) ಇದರಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ಎಷ್ಟು ನಿವೇಶನ ಮತ್ತು ಮನೆಗಳನ್ನು ನೀಡಲಾಗಿದೆ ; (ಪೂರ್ಣ ವಿವರ ನೀಡುವುದು)

(ಇ) ಮುಂದಿನ ಸಾಲಿನಲ್ಲಿ ಎಷ್ಟು ಗುರಿ ಇಟ್ಟುಕೊಳ್ಳಲಾಗಿದೆ ; ಮತ್ತು ಅನುದಾನ ಅಂದಾಜು ಮಾಡಲಾಗಿದೆ ?

## "ರೊಬೋಮೇಟ್ + " ಆ್ಯಪ್ ಅಳವಡಿಸುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೫೨ (೩೦೪) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಶಿಕ್ಷಣ ಕ್ಷೇತ್ರದಲ್ಲಿ ಬದಲಾವಣೆ ತರಲು "ರೊಬೋಮೇಟ್ + "ಆ್ಯಪ್ ಅಳವಡಿಸುವ ವಿಚಾರ ಸರ್ಕಾರದ ಮುಂದೆ ಇದೆಯೇ ;

(ಆ) ಹಾಗಿದ್ದಲ್ಲಿ, ಈ ಕುರಿತು ಕೈಗೊಂಡ ಕ್ರಮಗಳೇನು ; ಈ ಆ್ಯಪ್ ಸವಲತ್ತುಗಳ ಬಗ್ಗೆ ಇರುವ ಮಾಹಿತಿಗಳೇನು ;

(ಇ) ಸದರಿ ಆ್ಯಪ್ ಬಳಕೆಯನ್ನು ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ತಲುಪುವಂತೆ ಮಾಡಲು ಯಾವ ಕ್ರಮ ಕೈಗೊಳ್ಳಲಾಗುವುದು ;

(ಈ) "ರೊಬೋಮೇಟ್ +"ಆ್ಯಪ್ ಬಗ್ಗೆ ವಿದ್ಯಾರ್ಥಿಗಳಿಗೆ ಮಾಹಿತಿ ನೀಡಲು ಪ್ರತ್ಯೇಕವಾಗಿ ತರಬೇತಿ ಕಾರ್ಯಕ್ರಮಗಳನ್ನು ಆಯೋಜಿಸುವ ವಿಚಾರ ಸರ್ಕಾರದ ಮುಂದಿದೆಯೇ ? (ವಿವರ ನೀಡುವುದು)

## ವಿದ್ಯಾ ವಿಕಾಸ ಯೋಜನೆಯಡಿ ಶಾಲಾ ಮಕ್ಕಳಿಗೆ ಉಚಿತ ಸಮವಸ್ತ್ರ ನೀಡುವ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

೫೩ (೩೭೨) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಮುಖ್ಯ ಮಂತ್ರಿಗಳ ಅಧ್ಯಕ್ಷತೆಯಲ್ಲಿ ಕೈಮಗ್ಗ ಮತ್ತು ಜವಳಿ ಇಲಾಖೆಯಿಂದ ವಿದ್ಯಾ ವಿಕಾಸ ಯೋಜನೆಯಡಿ ಶಾಲಾ ಮಕ್ಕಳಿಗೆ ಉಚಿತ ಸಮವಸ್ತ್ರ ಸರಬರಾಜು ಮಾಡುವ ಸಂಬಂಧ ೨೦೧೫–೧೬ನೇ ಸಾಲಿನಲ್ಲಿ ಯಾವ ದಿನಾಂಕದಂದು ಸಭೆಯನ್ನು ನಡೆಸಲಾಗಿದೆ ;

(ಆ) ಹಾಗೆ ಸನ್ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಸಭೆಯನ್ನು ನಡೆಸಿದ್ದರೆ ಆ ಸಭೆಯ ನಿರ್ಣಯಗಳು ಯಾವುವು ; (ಪೂರ್ಣ ವಿವರ ನೀಡುವುದು)

(ಇ) ರಾಜ್ಯದಲ್ಲಿರುವ ವಿದ್ಯುತ್ ಮಗ್ಗ ನೇಕಾರರ ಅಭಿವೃದ್ಧಿಗಾಗಿ ಅವರು ತಯಾರು ಮಾಡುವ ಬಟ್ಟೆಗಳಿಗೆ ಮಾರುಕಟ್ಟೆ ಸೌಲಭ್ಯ ನೀಡುವ ದೃಷ್ಟಿಯಿಂದ ಕೆಎಸ್‌ಟಿಐಡಿಸಿ ಸಂಸ್ಥೆಯೊಂದಿಗೆ ಅಥವಾ ಕೈಮಗ್ಗ ಮತ್ತು ಜವಳಿ ಇಲಾಖೆಯೊಂದಿಗೆ ಸಮವಸ್ತ್ರ ಸರಬರಾಜಿಗೆ ಎಂಓಯು ಮಾಡಿಕೊಳ್ಳಲಾಗಿದೆಯೇ ; ಇಲ್ಲದಿದ್ದಲ್ಲಿ, ಕಾರಣಗಳೇನು ;

(ಈ) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯು ಸನ್ಮಾನ್ಯ ಮುಖ್ಯ ಮಂತ್ರಿಗಳ ಅಧ್ಯಕ್ಷತೆಯಲ್ಲಿನ ಸಭೆಯ ನಿರ್ಣಯ ಆಗಿದ್ದರೂ ಸಹ ೫ ವರ್ಷಗಳ ಅವಧಿಗೆ ಕೈಮಗ್ಗ ಮತ್ತು ಜವಳಿ ಇಲಾಖೆಯೊಂದಿಗೆ ಎಂಓಯು ಮಾಡಿಕೊಳ್ಳದೇ ವಿದ್ಯುತ್ ಮಗ್ಗ ನೇಕಾರರಿಗೆ ಕೆಎಸ್‌ಟಿಐಡಿಸಿ ಮೂಲಕ ವರ್ಷ ಪೂರ್ತಿ ಉದ್ಯೋಗ ಕೊಡಲು ಅಡ್ಡಗಾಲು ಹಾಕುತ್ತಿರುವುದು ನಿಜವೇ ;

(ಉ) ಹಾಗಿದ್ದಲ್ಲಿ, ಶಿಕ್ಷಣ ಇಲಾಖೆಯವರು ಎಂಓಯು ಮಾಡಿಕೊಳ್ಳಲು ಮೀನ ಮೇಷ ಎಣಿಸುತ್ತಿರುವುದಕ್ಕೆ ಕಾರಣವೇನು ; ಈ ಎಂಓಯು ಸಮಸ್ಯೆಯನ್ನು ಶಿಕ್ಷಣ ಇಲಾಖೆಯು ಯಾವಾಗ ಪರಿಹರಿಸುತ್ತದೆ ? (ಮಾಹಿತಿಯನ್ನು ನೀಡುವುದು)

## ವಿಜಯಪುರ ನಗರಕ್ಕೆ ಆಶ್ರಯ ಯೋಜನೆ ಮನೆಗಳ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೫೪ (೧೫) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ವಿಜಯಪುರ ನಗರಕ್ಕೆ ಆಶ್ರಯ ಯೋಜನೆ ಪ್ರಾರಂಭವಾದಾಗಿನಿಂದ ಇಲ್ಲಿಯವರೆಗೆ ಎಷ್ಟು ಆಶ್ರಯ ಮನೆಗಳನ್ನು ನಿರ್ಮಾಣ ಮಾಡಲಾಗಿದೆ ; (ವಿವರವಾದ ಮಾಹಿತಿ ನೀಡುವುದು)

(ಆ) ಕಳೆದ ಎರಡು ವರ್ಷಗಳಲ್ಲಿ ನೂತನವಾಗಿ ನಿರ್ಮಿಸಲಾದ ಮನೆಗಳ ಸಂಖ್ಯೆ ಎಷ್ಟು ; (ವರ್ಷಾವಾರು ಮಾಹಿತಿ ನೀಡುವುದು)

(ಇ) ಆಶ್ರಯ ಯೋಜನೆಯಡಿಯಲ್ಲಿ ಫಲಾನುಭವಿಗಳಿಗೆ ಮನೆ ನೀಡುವಾಗ ಯಾವ ಮಾನದಂಡವನ್ನು ಅನುಸರಿಸಲಾಗುವುದು ;

(ಈ) ಒಂದೇ ಕುಟುಂಬದವರಿಗೆ ಎರಡು ಅಥವಾ ಮೂರು ಮನೆಗಳನ್ನು ಮಂಜೂರಾತಿ ಮಾಡಲಾಗಿದೆ ಎಂಬ ಆರೋಪ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ;

(ಉ) ೨೦೧೨–೧೩ ರಿಂದ ೨೦೧೫–೧೬ರ ಅವಧಿಯಲ್ಲಿ ಎಷ್ಟು ಮನೆಗಳನ್ನು ನಿರ್ಮಾಣ ಮಾಡಲಾಗಿದೆ ; (ಫಲಾನುಭವಿಗಳ ಸಂಪೂರ್ಣ ವಿವರ ನೀಡುವುದು)

(ಊ) ಆಶ್ರಯ ಯೋಜನೆಯಡಿ ನಿರ್ಮಾಣವಾದ ಮನೆಗಳನ್ನು ಸಾಮಾಜಿಕ ನ್ಯಾಯದ ಅಡಿಯಲ್ಲಿ ಹಂಚಿಕೆ ಮಾಡಲಾಗಿದೆಯೇ ; ಒಂದೇ ಕೋಮಿಗೆ ಬಹುತೇಕ ಮನೆಗಳನ್ನು ಹಂಚಲಾಗಿದೆ ಎಂಬ ಆರೋಪ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ಕೊಡಗು ಜಿಲ್ಲೆಯಲ್ಲಿ ನಿರ್ಮಾಣ ಮಾಡಿರುವ ಶೌಚಾಲಯಗಳ ಬಗ್ಗೆ

**ಶ್ರೀ ಎಂ.ಪಿ. ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೫೫ (೮೦) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ –

ಕೊಡಗು ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ನಿರ್ಮಾಣ ಮಾಡಿರುವ ಶೌಚಾಲಯಗಳ ಸಂಖ್ಯೆ ಎಷ್ಟು ; ಬಿಡುಗಡೆಯಾಗಿರುವ ಅನುದಾನ ಎಷ್ಟು ? (ಗ್ರಾಮ ಪಂಚಾಯತಿವಾರು ವಿವರ ನೀಡುವುದು)

## ಜಲಪಾತಗಳ ಬಳಿ ಪ್ರವಾಸಿಗರ ದುರ್ಮರಣದ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೫೬ (೨೯೬) ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಗಗನಚುಕ್ಕಿ ಭರಚುಕ್ಕಿ ಜಲಪಾತ ಪ್ರದೇಶದ ಪ್ರವಾಸೋದ್ಯಮ ಚಟುವಟಿಕೆಗಳ ಅಭಿವೃದ್ಧಿಗೆ ಕಳೆದ ಮೂರು ವರ್ಷಗಳಲ್ಲಿ ಮಾಡಿರುವ ವೆಚ್ಚ ಎಷ್ಟು ; ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ;

(ಆ) ಕೇಂದ್ರ ಸರ್ಕಾರದಿಂದ ಬಂದಿರುವ ಅನುದಾನ ಎಷ್ಟು ; ರಾಜ್ಯ ಸರ್ಕಾರ ಒದಗಿಸಿರುವ ಅನುದಾನ ಎಷ್ಟು ; (ಪ್ರತಿಯೊಂದು ಕಾಮಗಾರಿಯ ವಿವರ ಒದಗಿಸುವುದು)

(ಇ) ಚಾಮರಾಜನಗರ ಜಿಲ್ಲೆಯ ಗಗನಚುಕ್ಕಿ, ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣದ ಬಲಮುರಿ, ಸಂಗಮ, ನಿಮಿಷಾಂಬಾ ಹಾಗೂ ಮಳವಳ್ಳಿ ತಾ. ಮುತ್ತತ್ತಿ ಮೊದಲಾದ ಕಡೆಗಳಲ್ಲಿ ಕಳೆದ ಒಂದು ವರ್ಷದಿಂದ ಆಕಸ್ಮಿಕವಾಗಿ ನೀರಿನಲ್ಲಿ ಮುಳುಗಿ ಮೃತಪಟ್ಟ ಪ್ರವಾಸಿಗರ ಸಂಖ್ಯೆ ಎಷ್ಟು ; (ಪ್ರಕರಣವಾರು ವಿವರ ಒದಗಿಸುವುದು)

(ಈ) ಈ ಪ್ರವಾಸಿ ಜಲತಾಣಗಳಲ್ಲಿ ಪ್ರವಾಸಿಗರ ಮಾರ್ಗದರ್ಶನಕ್ಕೆ ಮತ್ತು ರಕ್ಷಣೆಗೆ ಸೂಕ್ತ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲಾಗಿದೆಯೇ ; ಯಾವ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ? (ವಿವರ ನೀಡುವುದು)

## ನರೇಗ ಯೋಜನೆಯಲ್ಲಿನ ಅವ್ಯವಹಾರಗಳ ಬಗ್ಗೆ

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) –**

೫೭ (೩೯೨) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ ಮೂರು ವರ್ಷಗಳಲ್ಲಿ ನರೇಗಾ ಯೋಜನೆಯಡಿಯಲ್ಲಿ ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಬಿಡುಗಡೆಯಾದ ಹಣ ಎಷ್ಟು ; (ವರ್ಷವಾರು ವಿವರ ನೀಡುವುದು)

(ಆ) ಎಷ್ಟು ಮೊತ್ತಕ್ಕೆ Utilisation Certificate ಸಲ್ಲಿಸಲಾಗಿದೆ ಬಾಕಿ ಎಷ್ಟಕ್ಕೆ ಸಲ್ಲಿಸಬೇಕಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ಈ ಯೋಜನೆಯಡಿಯಲ್ಲಿ ಹಣ ದುರುಪಯೋಗವಾಗಿರುವ ಎಷ್ಟು ಪ್ರಕರಣಗಳು ದಾಖಲಾಗಿವೆ ? (ಕಾಮಗಾರಿವಾರು, ಜಿಲ್ಲಾವಾರು, ವರ್ಷವಾರು ವಿವರ ನೀಡುವುದು)

## ಅಲ್ಪಸಂಖ್ಯಾತರ ಶೈಕ್ಷಣಿಕ ಶಿಕ್ಷಣಕ್ಕೆ ಉತ್ತೇಜನ ನೀಡುವ ಬಗ್ಗೆ

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ನಾಮನಿರ್ದೇಶನ ಹೊಂದಿದವರು) –**

೫೮ (೩೬೩) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಅಲ್ಪಸಂಖ್ಯಾತರ ಶೈಕ್ಷಣಿಕ ಉತ್ತೇಜನಕ್ಕಾಗಿ ಶಿಕ್ಷಣ ಇಲಾಖೆಯ ವತಿಯಿಂದ ಹಮ್ಮಿಕೊಂಡಿರುವ ವಿವಿಧ ಯೋಜನೆಗಳು ಯಾವುವು ; (ಶಾಲಾ ಕಟ್ಟಡ,

ಕಟ್ಟಡ ದುರಸ್ಥಿ ಹಾಗೂ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವ ಯೋಜನೆಗಳ ವಿವರ ನೀಡುವುದು)

(ಆ) ದಾವಣಗೆರೆ ಜಿಲ್ಲೆಯಲ್ಲಿರುವ ಅಲ್ಪಸಂಖ್ಯಾತರ ಉರ್ದು ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ, ಸರ್ಕಾರಿ ಶಾಲೆಗಳ ದುರಸ್ಥಿ ಸಂಬಂಧವಾಗಿ ಈ ಹಿಂದಿನ ಅವಧಿಯ ಅಧಿವೇಶನದಲ್ಲಿ ಅನುದಾನದ ಲಭ್ಯತೆಯಂತೆ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುವುದೆಂದು ತಿಳಿಸಿದಂತೆ ಈವರೆವಿಗೂ ದುರಸ್ಥಿ ಕಾಮಗಾರಿಗಳನ್ನು ಕೈಗೊಳ್ಳದಿರಲು ಕಾರಣವೇನು ;

(ಇ) ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ವಿವಿಧ ಯೋಜನೆಗಳು ಜಾರಿಯಲ್ಲಿದ್ದಾಗ್ಯೂ ಕೂಡ ಶಿಥಿಲಗೊಂಡಿರುವ ಶಾಲಾ ಕಟ್ಟಡಗಳನ್ನು ದುರಸ್ಥಿಪಡಿಸಲು ಹಾಗೂ ವಿಳಂಬಕ್ಕೆ ಕಾರಣ ಕರ್ತರಾದ ಅಧಿಕಾರಿಗಳು ಯಾರು ; ಅಂತಹ ಅಧಿಕಾರಿಗಳ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಸದರಿ ಕಟ್ಟಡಗಳನ್ನು ಯಾವ ಕಾಲಾವಧಿಯೊಳಗಾಗಿ ದುರಸ್ಥಿ ಪಡಿಸಲಾಗುವುದು? (ವಿವರ ನೀಡುವುದು)

## ಚಲನಚಿತ್ರೋತ್ಸವಕ್ಕೆ ನಿರ್ದೇಶನಾಲಯ ಕುರಿತು

**ಡಾ. ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) –**

೫೯ (೩೭೬) ಮೂಲಸೌಲಭ್ಯ ಅಭಿವೃದ್ಧಿ ಹಾಗೂ ವಾರ್ತಾ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಇತ್ತೀಚೆಗೆ ಕರ್ನಾಟಕದಲ್ಲಿ ಜರುಗಿದ ಅಂತರರಾಷ್ಟ್ರೀಯ ಚಲನಚಿತ್ರೋತ್ಸವ ಸಮಾವೇಶದಲ್ಲಿ, ಬೆಂಗಳೂರು ಚಲನಚಿತ್ರೋತ್ಸವಗಳಿಗೆ ಖಾಯಂ ಆಗಿ ಒಂದು ನಿರ್ದೇಶನಾಲಯ ಮತ್ತು ಕನಿಷ್ಠ ೨೫.೦೦ ಕೋಟಿಗಳ ವಾರ್ಷಿಕ ಅನುದಾನಗಳನ್ನು ಆಯವ್ಯಯದಲ್ಲಿ ಕಾಯ್ದಿರಿಸಬೇಕೆಂಬ ಅಭಿಪ್ರಾಯಗಳನ್ನು ದೇಶಿ ಮತ್ತು ವಿದೇಶಿ ಅತಿಥಿಗಳು ವ್ಯಕ್ತಪಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಅಥವಾ ಬಾರದಿದ್ದಲ್ಲಿ, ಈ ಅಭಿಪ್ರಾಯಗಳನ್ನು ಸರ್ಕಾರ ಚಲನಚಿತ್ರರಂಗದ ಹಿತದೃಷ್ಟಿಯಿಂದ ಪರಿಗಣಿಸುವುದೇ ?

## "ಇನ್ವೆಸ್ಟ್ ಕರ್ನಾಟಕ" ಸಮಾವೇಶದ ಬಗ್ಗೆ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) +**
**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) +**
**ಶ್ರೀ ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) +**
**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) +**
**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೬೦ (೩೬೫+೩೬೧+೨೮೬+೩೦೨+೪೦೦) ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರು ನಗರದಲ್ಲಿ ಫೆಬ್ರವರಿ ತಿಂಗಳಲ್ಲಿ ನಡೆದ ಇನ್ವೆಸ್ಟ್ ಕರ್ನಾಟಕ ೨೦೧೬ರಲ್ಲಿ ಹೂಡಿಕೆದಾರರು ರಾಜ್ಯದ ಯಾವ ಯಾವ ಭಾಗಗಳಲ್ಲಿ ಉದ್ದಿಮೆಗಳನ್ನು ಪ್ರಾರಂಭಿಸಲು ಆಸಕ್ತಿ ಹೊಂದಿದ್ದಾರೆ ; ವಿಶ್ವದ ವಿವಿಧ ಕಂಪನಿಗಳಿಂದ ಹರಿದು ಬಂದ ಬಂಡವಾಳ ಎಷ್ಟು ; ಯಾವ ಯಾವ ವಲಯಕ್ಕೆ ಸದರಿ ಬಂಡವಾಳ ಹೂಡಿಕೆಯಾಗಲಿದೆ ; (ಕಂಪನಿವಾರು, ಸ್ಥಳವಾರು, ಬಂಡವಾಳದ ವಿವರಗಳನ್ನು ನೀಡುವುದು)

(ಆ) ಹೂಡಿಕೆದಾರರ ಸಮಾವೇಶದಲ್ಲಿ ಭಾಗವಹಿಸಿರುವ ಒಟ್ಟು ಉದ್ದಿಮೆದಾರರ ಸಂಖ್ಯೆ ಎಷ್ಟು ; ಯಾವ ಯಾವ ದೇಶ ವಿದೇಶಗಳಿಂದ ಹೂಡಿಕೆದಾರರು ಭಾಗವಹಿಸಿದ್ದರು ; ಅವರ ಪ್ರಮುಖ ಬೇಡಿಕೆಗಳೇನು ; (ವಿವರ ನೀಡುವುದು)

(ಇ) ವಿಶೇಷವಾಗಿ ಉತ್ತರ ಕರ್ನಾಟಕ ಭಾಗದಲ್ಲಿ ಬಂಡವಾಳ ಹೂಡಲು ಎಷ್ಟು ಕಂಪನಿಗಳು ಮುಂದಾಗಿವೆ ; ಅವು ಯಾವುವು ; ಯಾವ ಮಾನದಂಡಗಳ ಮೂಲಕ ಕಂಪನಿಗಳಿಗೆ ಅವಕಾಶ ನೀಡಲಾಗುತ್ತಿದೆ ;

(ಈ) ಹೂಡಿಕೆದಾರರಿಗೆ ಅವಕಾಶಗಳನ್ನು ಒದಗಿಸಲು ಮತ್ತು ಯೋಜನೆಗಳನ್ನು ಜಾರಿಗೆ ತರಲು ಇಲಾಖೆ ಪ್ರತ್ಯೇಕವಾದ ವಿಭಾಗವನ್ನು ರಚಿಸಿದೆಯೇ ; (ವಿವರ ನೀಡುವುದು)

(ಉ) ೨೦೧೪–೧೫ ಮತ್ತು ೨೦೧೫–೧೬ರಲ್ಲಿ ಕೈಗಾರಿಕೆಗಳಿಂದ ನೀಡಿದ ಒಟ್ಟು ಉದ್ಯೋಗಗಳು ಎಷ್ಟು ; ಈ ಹೂಡಿಕೆಯಿಂದ ಸೃಜನೆಯಾಗಲಿರುವ ಹುದ್ದೆಗಳು ಎಷ್ಟು ; ಸದರಿ ಹುದ್ದೆಗಳಲ್ಲಿ ಕನ್ನಡಿಗರಿಗೆ ಹೆಚ್ಚಿನ ಅವಕಾಶ ಕಲ್ಪಿಸಲಾಗುತ್ತದೆಯೇ ; (ವರ್ಷಾವಾರು ನೀಡುವುದು)

(ಊ) ಬಂಡವಾಳ ಹೂಡುವ ಕಂಪನಿಗಳಿಗೆ ಭೂಮಿ, ವಿದ್ಯುತ್, ನೀರು ಹಾಗೂ ಇನ್ನಿತರೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಯಾವ ರೀತಿಯ ಕ್ರಮ ಕೈಗೊಳ್ಳಲಾಗುವುದು ;

(ಋ) ಈ ಬಾರಿ ನಡೆದ "ಇನ್ವೆಸ್ಟ್ ಕರ್ನಾಟಕ" ಕಾರ್ಯಕ್ರಮ ನಡೆಸಲು ಆದ ಖರ್ಚು ಎಷ್ಟು ; (ವಿವರ ನೀಡುವುದು)

(ಎ) ಈ ಕಾರ್ಯಕ್ರಮದಿಂದ ಆಗಿರುವ ಸಾಧನೆ ಏನು ; ಇದು ಸಾಕಾರಗೊಳ್ಳಲು ಬೇಕಾಗುವ ಕಾಲಾವಧಿ ಎಷ್ಟು ? (ವಿವರ ಒದಗಿಸುವುದು)

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಪಿ7, ಕಾ.ಸೂ. 998, ಪ್ರತಿಗಳು 1500